**All India Radio: Bangalore**
**Regional Bulletin In Kannada**
**22.02.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**22.02.2026 / 2.30 p.m.**

**<><><><>**

ಮುಖ್ಯಾಂಶಗಳು

1. ಮನ್ ಕೀ ಬಾತ್‌ನಲ್ಲಿಂದು ರಾಜ್ಯದ ಕೃಷಿ ಉತ್ಪನ್ನಗಳ ಬಗ್ಗೆ ಪ್ರಧಾನಿ ಶ್ಲಾಘನೆ; ನಂಜನಗೂಡು ರಸಬಾಳೆ, ಮೈಸೂರಿನ ವೀಳ್ಯದೆಲೆ, ಇಂಡಿನಿಂಬೆಹಣ್ಣು ಉಲ್ಲೇಖ
2. ಮುಖ್ಯಮಂತ್ರಿ ಸಿದ್ದರಾಮಯ್ಯ ಉತ್ತರಕನ್ನಡ ಜಿಲ್ಲಾ ಪ್ರವಾಸ ; ಅಂಕೋಲಾದಲ್ಲಿ ಗಂಗಾವಳಿ ನದಿ ಸೇತುವೆ ಉದ್ಘಾಟನ
3. ಎತ್ತಿನಹೊಳೆ ಸಮಗ್ರ ಕುಡಿಯುವ ನೀರು ಯೋಜನೆ ; ಕಾಲಮಿತಿಯೊಳಗೆ ಕಾಮಗಾರಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚನೆ
4. ಚಿಕ್ಕಮಗಳೂರಿನಲ್ಲಿ ಮುಂದುವರಿದ ಕಾಡಾನೆ ಹಾವಳಿ ; ಇಂದು ಓರ್ವ ಕಾರ್ಮಿಕ ಮಹಿಳೆ ಸಾವು ; ಕಾಡಾನೆಯೊಂದರ ಸೆರೆ

<><><><>

ನವದೆಹಲಿಯ ಭಾರತ ಮಂಟಪದಲ್ಲಿ ಇತ್ತೀಚೆಗೆ ನಡೆದ 'ಜಾಗತಿಕ ಎಐ ಇಂಪ್ಯಾಕ್ಟ್ ಶೃಂಗಸಭೆ' ಭಾರತದ ತಾಂತ್ರಿಕ ಶಕ್ತಿಯನ್ನು ಜಗತ್ತಿಗೆ ತೋರಿಸಿಕೊಟ್ಟಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಆಕಾಶವಾಣಿಯ ಜನಪ್ರಿಯ ಮನ್ ಕೀ ಬಾತ್ ಕಾರ್ಯಕ್ರಮದ ಮೂಲಕ ಸಮಸ್ತ ಭಾರತೀಯರನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಶೃಂಗಸಭೆಯಲ್ಲಿ ಪ್ರದರ್ಶಿಸಲಾದ ಅಮುಲ್ ಸಂಸ್ಥೆಯ ಉತ್ಪನ್ನಗಳ ಮೇಲಿದ್ದ ಪಶುಗಳ ಚಿಕಿತ್ಸೆ ಮತ್ತು ನಿರ್ವಹಣೆಯಲ್ಲಿ ಎಐ ತಂತ್ರಜ್ಞಾನವನ್ನು ಬಳಸುತ್ತಿರುವ ಕುರಿತ ಮಾಹಿತಿ ಹಾಗೂ ಪ್ರಾಚೀನ ಜ್ಞಾನ ಪರಂಪರೆಯಾದ ಸುಶ್ರುತ ಸಂಹಿತೆಯಂತಹ ಹಸ್ತಪ್ರತಿಗಳನ್ನು ಎಐ ಮೂಲಕ ಸಂರಕ್ಷಿಸಿ, ವಿವಿಧ ಭಾಷೆಗಳಿಗೆ ಅನುವಾದಿಸುತ್ತಿರುವುದು ಜಾಗತಿಕ ಮಟ್ಟದಲ್ಲಿ ಮೆಚ್ಚುಗೆಗೆ ಪಾತ್ರವಾಗಿದೆ ಎಂದರು. ಇದೇ ಸಂದರ್ಭದಲ್ಲಿ ಪ್ರಧಾನಿ, ಭಾರತವು ಮೂರು ಸ್ವದೇಶಿ ನಿರ್ಮಿತ ಎಐ ಮಾದರಿಗಳನ್ನು ಬಿಡುಗಡೆ ಮಾಡಿದೆ ಎಂದು ಹರ್ಷ ವ್ಯಕ್ತಪಡಿಸಿದರು. ಪ್ರಧಾನಿಯವರು ತಮ್ಮ ಭಾಷಣದಲ್ಲಿ ಇಂದು

ಕರ್ನಾಟಕದ ಕೃಷಿ ಸಾಧನೆಯನ್ನು ವಿಶೇಷವಾಗಿ ಉಲ್ಲೇಖಿಸಿ ಶ್ಲಾಘಿಸಿದರು. ನಮ್ಮ ದೇಶದ ರೈತರು ಇಂದು ಕೇವಲ ಉತ್ಪಾದನೆಗೆ ಸೀಮಿತವಾಗದೆ, ಗುಣಮಟ್ಟ ಮತ್ತು ಮೌಲ್ಯವರ್ಧನೆಗೆ ಹೆಚ್ಚಿನ ಒತ್ತು ನೀಡುತ್ತಿದ್ದಾರೆ. ಈ ನಿಟ್ಟಿನಲ್ಲಿ ಕರ್ನಾಟಕದ ಉತ್ಪನ್ನಗಳಾದ ನಂಜನಗೂಡಿನ ರಸಬಾಳೆ, ಮೈಸೂರಿನ ವೀಳ್ಯದೆಲೆ ಮತ್ತು ಇಂಡಿ ನಿಂಬೆಹಣ್ಣುಗಳು ತಮ್ಮ ವಿಶಿಷ್ಟ ರುಚಿ ಮತ್ತು ಗುಣಮಟ್ಟದಿಂದಾಗಿ ಜಿಐ ಟ್ಯಾಗ್ ಪಡೆದುಕೊಂಡಿವೆ. ಈ ಉತ್ಪನ್ನಗಳು ಈಗ ಮಾಲ್ಡೀವ್ಸ್‌ಗೆ ರಫ್ತಾಗುತ್ತಿರುವುದು ರಾಜ್ಯದ ರೈತರ ಕಠಿಣ ಪರಿಶ್ರಮಕ್ಕೆ ಸಿಕ್ಕ ಜಾಗತಿಕ ಮನ್ನಣೆಯಾಗಿದೆ ಎಂದು ಅವರು ಬಣ್ಣಿಸಿದರು. ರಾಜ್ಯದ ಕೃಷಿ ಉತ್ಪನ್ನಗಳ ಕುರಿತು ಪ್ರಧಾನಿ ಶ್ಲಾಘನೆ ವ್ಯಕ್ತಪಡಿಸಿರುವ ಕುರಿತು ಮಾತನಾಡಿರುವ ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್, ಮೈಸೂರು ವೀಳ್ಯದೆಲೆ ಮತ್ತು ನಂಜನಗೂಡು ರಸಬಾಳೆಯ ವೈಶಿಷ್ಯತೆಯನ್ನು ಶ್ಲಾಘಿಸಿರುವುದು ಸ್ವಾಗತಾರ್ಹ. ಈ ತಳಿಗಳ ಉಳಿವಿಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ವಿಶೇಷ ಪ್ರೋತ್ಸಾಹದಾಯಕ ಯೋಜನೆಗಳನ್ನು ಜಾರಿಗೆ ತರಬೇಕು ಎಂದಿದ್ದಾರೆ.

**ಧ್ವನಿ : ಕುರುಬೂರು ಶಾಂತಕುಮಾರ್ (೪೭ ಸೆಕೆಂಡ್‌ಗಳು)**

ಭಾರತವು ಇಂದು ವಿಶ್ವದ ಅತಿದೊಡ್ಡ ಭತ್ತ ಉತ್ಪಾದಕ ರಾಷ್ಟ್ರವಾಗಿದ್ದು, ೧೫ ಕೋಟಿ ಟನ್‌ಗಿಂತ ಅಧಿಕ ಉತ್ಪಾದನೆಯ ಮೂಲಕ ವಿಶ್ವದ ಆಹಾರ ಬುಟ್ಟಿಗೆ ಕೊಡುಗೆ ನೀಡುತ್ತಿದೆ ಎಂದು ತಿಳಿಸಿದರು. ಇದಲ್ಲದೆ, ಒಡಿಶಾದ ರೈತ ಹಿರೋದ್ ಪಟೇಲ್ ಅವರ ಸಮಗ್ರ ಕೃಷಿ ಮಾದರಿ ಮತ್ತು ಕೇರಳದ ತ್ರಿಶೂರ್‌ನಲ್ಲಿ ೫೭೦ ತಳಿಯ ಭತ್ತ ಬೆಳೆಯುತ್ತಿರುವ ರೈತರ ಕಾರ್ಯವನ್ನು ಅವರು ಸ್ಮರಿಸಿದರು. ಕ್ರೀಡಾ ಕ್ಷೇತ್ರದಲ್ಲಿ ಭಾರತೀಯ ಮೂಲದ ಆಟಗಾರರ ಸಾಧನೆಯನ್ನು ಮೆಚ್ಚಿದ ಪ್ರಧಾನಿ, ಟಿ-೨೦ ವಿಶ್ವಕಪ್‌ನಲ್ಲಿ ಕೆನಡಾ, ಅಮೆರಿಕ, ಓಮನ್ ಮತ್ತು ಇಟಲಿಯಂತಹ ತಂಡಗಳಲ್ಲಿ ಆಡುತ್ತಿರುವ ಭಾರತೀಯ ಮೂಲದ ಯುವಕರು ಭಾರತಕ್ಕೆ ಹೆಮ್ಮೆ ತರುತ್ತಿರುವುದಾಗಿ ಹೇಳಿದರು. ಇದೇ ವೇಳೆ ಮಾನವೀಯತೆಯ ದೃಷ್ಟಿಯಿಂದ ಅಂಗಾಂಗ ದಾನದ ಮಹತ್ವವನ್ನು ವಿವರಿಸಿದ ಅವರು, ಕೇರಳದ ೧೦ ತಿಂಗಳ ಪುಟ್ಟ ಮಗು ಆಲಿನ್ ಶೇರಿನ್ ಅಬ್ರಹಾಂನ ಪೋಷಕರು ತೆಗೆದುಕೊಂಡ ಅಂಗಾಂಗ ದಾನದ ನಿರ್ಧಾರ, ಅಂಗಾಂಗ ಕಸಿ ಮಾಡಿಸಿಕೊಂಡ ಲಕ್ಷ್ಮಿ ದೇವಿ ಮತ್ತು ಗೌರಂಗ್ ಬ್ಯಾನರ್ಜಿ ಅವರ ಕಥೆಗಳು ಅಂಗಾಂಗ ದಾನದ ಶಕ್ತಿಯನ್ನು ಜಗತ್ತಿಗೆ ಸಾರುತ್ತಿವೆ ಎಂದರು. ರಾಷ್ಟ್ರದ ಸಾಂಸ್ಕೃತಿಕ ಸ್ವಾತಂತ್ರ್ಯದ ಬಗ್ಗೆ ಮಾತನಾಡಿದ ಅವರು, ಫೆಬ್ರವರಿ ೨೩

ರಂದು ರಾಷ್ಟ್ರಪತಿ ಭವನದಲ್ಲಿ ಸ್ವತಂತ್ರ ಭಾರತದ ಮೊದಲ ಭಾರತೀಯ ಗವರ್ನರ್ ಜನರಲ್ ಸಿ. ರಾಜಗೋಪಾಲಾಚಾರಿ ಅವರ ಪ್ರತಿಮೆ ಅನಾವರಣಗೊಳ್ಳಲಿರುವ ಐತಿಹಾಸಿಕ ಕ್ಷಣವನ್ನು ಹಂಚಿಕೊಂಡರು. ಬ್ರಿಟಿಷ್ ವಾಸ್ತುಶಿಲ್ಪಿ ಲೂಟ್ಯೆನ್ಸ್ ಪ್ರತಿಮೆಯಿದ್ದ ಜಾಗದಲ್ಲಿ ಈಗ ರಾಜಾಜಿ ಅವರ ಪ್ರತಿಮೆ ಸ್ಥಾಪನೆಯಾಗುತ್ತಿರುವುದು 'ಗುಲಾಮಗಿರಿಯ ಮಾನಸಿಕತೆಯಿಂದ ಮುಕ್ತಿ' ಪಡೆಯುವ ದಿಕ್ಕಿನಲ್ಲಿ ಒಂದು ದೊಡ್ಡ ಹೆಜ್ಜೆಯಾಗಿದೆ. ಫೆಬ್ರವರಿ ೨೪ ರಿಂದ ಮಾರ್ಚ್ ೧ ರವರೆಗೆ ಸಾರ್ವಜನಿಕರು ಈ ಪ್ರದರ್ಶನವನ್ನು ವೀಕ್ಷಿಸಬಹುದು ಎಂದು ಅವರು ಮಾಹಿತಿ ನೀಡಿದರು. ಬ್ಯಾಂಕಿಂಗ್ ಸುರಕ್ಷತೆಯ ಬಗ್ಗೆ ಎಚ್ಚರಿಸಿದ ಪ್ರಧಾನಿಯವರು, ಡಿಜಿಟಲ್ ಅರೆಸ್ಟ್ ಮತ್ತು ವಂಚನೆಗಳಿಂದ ದೂರವಿರಲು ಕಾಲಕಾಲಕ್ಕೆ ಬ್ಯಾಂಕ್ ಖಾತೆಗಳ ಕೆವೈಸಿ ನವೀಕರಿಸುವುದು ಅತ್ಯಗತ್ಯ ಎಂದರು. ಪಾಸ್‌ವರ್ಡ್‌ಗಳನ್ನು ಪದೇ ಪದೇ ಬದಲಾಯಿಸುವಂತೆ ಮತ್ತು ಒಟಿಪಿ ವಿವರಗಳನ್ನು ಯಾರೊಂದಿಗೂ ಹಂಚಿಕೊಳ್ಳದಂತೆ ಅವರು ನಾಗರಿಕರಿಗೆ ಕರೆ ನೀಡಿದರು. ಪರೀಕ್ಷೆ ಎದುರಿಸುತ್ತಿರುವ ವಿದ್ಯಾರ್ಥಿಗಳನ್ನು 'ಪರೀಕ್ಷಾ ಯೋಧರು' ಎಂದು ಕರೆದ ಅವರು, ಅಂಕಗಳು ಜೀವನದ ಅಂತಿಮ ಮಾನದಂಡವಲ್ಲ, ಪೋಷಕರು ಮಕ್ಕಳ ಪ್ರಯತ್ನವನ್ನು ಗಮನಿಸಿ ಪ್ರೋತ್ಸಾಹಿಸಬೇಕು ಎಂದು ಕಿವಿಮಾತು ಹೇಳಿದರು. ಬಳಿಕ ಇದೇ ೨೪ ರಂದು ತಮಿಳುನಾಡಿನ ಮಾಜಿ ಮುಖ್ಯಮಂತ್ರಿ ಜಯಲಲಿತಾ ಅವರ ಜನ್ಮದಿನದ ಹಿನ್ನೆಲೆ ಅವರಿಗೆ ಪ್ರಧಾನಿ, ಶ್ರದ್ಧಾಂಜಲಿ ಸಲ್ಲಿಸಿದರು. ರಂಜಾನ್ ಮತ್ತು ಹೋಳಿ ಹಬ್ಬದ ಶುಭಾಶಯಗಳನ್ನು ತಿಳಿಸುತ್ತಾ, ಹಬ್ಬಗಳಲ್ಲಿ 'ವೋಕಲ್ ಫಾರ್ ಲೋಕಲ್' ಮಂತ್ರದಡಿ ಸ್ವದೇಶಿ ವಸ್ತುಗಳನ್ನೇ ಬಳಸುವಂತೆ ಮನವಿ ಮಾಡಿದರು.

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಉತ್ತರಕನ್ನಡ ಜಿಲ್ಲಾ ಪ್ರವಾಸ ಕೈಗೊಂಡಿದ್ದು, ಅಂಕೋಲಾ ತಾಲೂಕಿನ ಮಂಜಗುಣಿ ಗ್ರಾಮದಲ್ಲಿ ಗಂಗಾವಳಿ ನದಿಗೆ ಅಡ್ಡಲಾಗಿ ನಿರ್ಮಿಸಲಾಗಿರುವ ನೂತನ ಸೇತುವೆಯನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವ ಮಂಕಾಳವೈದ್ಯ, ಶಾಸಕ ಸತೀಶ್ ಸೈಲ್ ಮತ್ತಿತರರು ಉಪಸ್ಥಿತರಿದ್ದರು. ೩೪ ಕೋಟಿ ೨೦ ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಈ ಸೇತುವೆ, ಅಂಕೋಲಾ ಮತ್ತು ಕುಮುಟಾ ತಾಲೂಕಿನ ಮಂಜಗುಣಿ ಮತ್ತು ಗಂಗಾವಳಿ  ಗ್ರಾಮಗಳ ನಡುವೆ ಸುಗಮ ಸಂಪರ್ಕ ಕಲ್ಪಿಸಲಿದ್ದು,

ಈ ಭಾಗದ ಜನರ ಬಹುದಿನಗಳ ಸಂಚಾರ ಸಮಸ್ಯೆಯನ್ನು ನೀಗಿಸಲಿದೆ. ಕಾರವಾರಕ್ಕೆ ಭೇಟಿ ನೀಡಲಿರುವ ಮುಖ್ಯಮಂತ್ರಿ ಅಲ್ಲಿರುವ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ೪೫೦ ಹಾಸಿಗೆಗಳ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡವನ್ನು ಉದ್ಘಾಟಿಸಲಿದ್ದಾರೆ. ಇದರಿಂದ ಜಿಲ್ಲೆಯ ಆರೋಗ್ಯ ಕ್ಷೇತ್ರದಲ್ಲಿ ಕ್ರಾಂತಿಕಾರಕ ಬದಲಾವಣೆಯಾಗಬೇಕು. ಸುಸಜ್ಜಿತ ವೈದ್ಯಕೀಯ ಚಿಕಿತ್ಸೆ ಜನಸಾಮಾನ್ಯರಿಗೆ ಲಭ್ಯವಾಗಲಿದೆ. ಇದೇ ಸಂದರ್ಭದಲ್ಲಿ ಅವರು ಯಲ್ಲಾಪುರ ಮತ್ತು ಮುಂಡಗೋಡು ತಾಲೂಕುಗಳ ಹೊಸ ಪ್ರವಾಸಿ ಮಂದಿರಗಳ ನಿರ್ಮಾಣ ಕಾಮಗಾರಿಗಳಿಗೆ ಚಾಲನೆ ನೀಡುವ ಜೊತೆಗೆ ಖಾನಾಪುರ, ತಾಳಗುಪ್ಪ ರಾಜ್ಯ ಹೆದ್ದಾರಿ-೯೩ರಲ್ಲಿ ನಿರ್ಮಿಸಲಾದ ಸೇತುವೆಯನ್ನು ಉದ್ಘಾಟಿಸಲಿದ್ದಾರೆ.

<><><>

ಕೋಲಾರ ಜಿಲ್ಲೆಯ ಬಹುನಿರೀಕ್ಷಿತ ಎತ್ತಿನಹೊಳೆ ಸಮಗ್ರ ಕುಡಿಯುವ ನೀರು ಯೋಜನೆ ಕಾಮಗಾರಿಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಲು ವಿಸ್ತೃತ ಭೂಸ್ವಾಧೀನ ಯೋಜನಾ ವರದಿ ಸಿದ್ಧಪಡಿಸುವ ಕಾರ್ಯ ವೇಗಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಎತ್ತಿನಹೊಳೆ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಕೋಲಾರ ತಾಲ್ಲೂಕಿನ ನರಸಾಪುರ, ವೇಮಗಲ್ ಮತ್ತು ವಕ್ಕಲೇರಿ ಹೋಬಳಿಗಳ ವ್ಯಾಪ್ತಿಯಲ್ಲಿನ ಭೂಸ್ವಾಧೀನ ಪ್ರಗತಿಯನ್ನು ಪರಿಶೀಲಿಸಿದ ಜಿಲ್ಲಾಧಿಕಾರಿಗಳು, ಇರುವ ಭೂಮಿಗೆ ಸಂಬಂಧಿಸಿದಂತೆ ತಕ್ಷಣವೇ ಗೆಜೆಟ್ ಅಧಿಸೂಚನೆ ಹೊರಡಿಸಬೇಕು ಹಾಗೂ ಬಂದಿರುವ ಆಕ್ಷೇಪಣೆಗಳ ವಿಚಾರಣೆಯನ್ನು ಶೀಘ್ರ ಪೂರ್ಣಗೊಳಿಸಬೇಕು ಎಂದು ವಿಶೇಷ ಭೂಸ್ವಾಧೀನಾಧಿಕಾರಿಗಳಿಗೆ ಸೂಚಿಸಿದರು. ಭೂಸ್ವಾಧೀನ ಕಾಯ್ದೆಯನ್ವಯ ಪ್ರಾಥಮಿಕ ಅಧಿಸೂಚನೆ ಹೊರಡಿಸಿದ ಮೂರು ತಿಂಗಳೊಳಗೆ ಶೇಕಡ ೫೦ರಷ್ಟು ಪರಿಹಾರ ಹಣವನ್ನು ಭೂಮಾಲೀಕರಿಗೆ ಪಾವತಿಸಬೇಕು ಎಂದರು.

<><><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಾಡಾನೆಗಳ ಹಾವಳಿ ಮುಂದುವರೆದಿದೆ. ಜಿಲ್ಲೆಯ ಹುಣಸೇಹಳ್ಳಿ ಸಮೀಪದ ಪುರ ಗ್ರಾಮದಲ್ಲಿ ಇಂದು ಕಾರ್ಮಿಕ ಮಹಿಳೆಯೊಬ್ಬರು ಕಾಡಾನೆ ದಾಳಿಯಿಂದ ಮೃತಪಟ್ಟಿದ್ದಾರೆ. ಕಳೆದ ಒಂದು ವಾರದ ಹಿಂದೆ ಇದೇ ಗ್ರಾಮದಲ್ಲಿ ಕಾಡಾನೆ ದಾಳಿಯಿಂದ ಕಾರ್ಮಿಕರೊಬ್ಬರು ಮೃತಪಟ್ಟಿದ್ದರು. ಗ್ರಾಮದಲ್ಲಿ ಕಾಡಾನೆ ಸೆರೆಗೆ ಕಾರ್ಯಾಚರಣೆ

ನಡೆಸಲಾಗಿದ್ದು, ಅರಣ್ಯ ಇಲಾಖೆ ಸಿಬ್ಬಂದಿ ೭ ಕುಮ್ಕಿ ಆನೆಗಳ ಸಹಿತ ಕಾರ್ಯಾಚರಣೆ ನಡೆಸಿ ಕಾಡನೆಯೊಂದನ್ನು ಸೆರೆ ಹಿಡಿದಿದ್ದಾರೆ. ಈ ಹಿನ್ನೆಲೆಯಲ್ಲಿ ಚಿಕ್ಕಮಗಳೂರು ತಾಲೂಕಿನ ದಂಬದಹಳ್ಳಿ, ಮತ್ತಾವರ, ಮೂಕ್ತಿಹಳ್ಳಿ ಹಾಗು ಮೂಡಿಗೆರೆ ತಾಲೂಕಿನ ಮಾಕೋನಹಳ್ಳಿ, ಹೊರಟ್ಟಿ ಚಂದ್ರಾಪುರ ಗ್ರಾಮಗಳ ಸುತ್ತ ಮುತ್ತ ಕಾಡಾನೆಗಳು ಸಂಚರಿಸುತ್ತಿದ್ದು ಸಾರ್ವಜನಿಕರು ಎಚ್ಚರಿಕೆಯಿಂದ ಇರುವಂತೆ ಅರಣ್ಯ ಇಲಾಖೆ ಮನವಿ ಮಾಡಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>